9 ಶ್ರೀರಂಗಪಟ್ಟಣ 10 ಕೃಷ್ಣರಾಜಪೇಟೆ 11 ನಾಗಮಂಗಲ 12 ಮಂಡ್ಯ 13 ಮಳವಳ್ಳಿ	1896ನೇ ಇಸವಿ ಜುಲೈ 18ರಲ್ಲಿ ಫ್ರೆಂಚ್‌ರಾಕ್ಸ್ ಸಬ್ ಡಿವಿಜ್ ಆಫಿಸಿನಲ್ಲಿ	ಫ್ರೆಂಚ್‌ರಾಕ್ಸ್ ಸಬ್ ಡಿವಿಜ್ ಆಫಿಸರವರು.

(2.) ಜಡಸವಾಲ್‌ದಾರನು ಹರಾಜು ಕಾಲದಲ್ಲಿ ತನ್ನ ಸವಾಲ್ ಅಂಗೀಕರಿಸಲ್ಪಟ್ಟ ಕೂಡ್ಲೆ ಸವಾಲ್ ಮೊಬಲಗು ಪೈಕಿ ಶೇಕಡಾ 25 ರೂಪಾಯಿಗಳ ಪ್ರಕಾರ ಡಿಪಾಜಿಟ್ ಹಾಜರ್ಮಾಡಬೇಕು. ಬಾಕಿ ಮೊಬಲಗನ್ನು ರೂಪಾಯಿ 1ಕ್ಕೆ ಒಂದಾಣೆ ಮೇರೆ ಲೋಕಲ್ ಸೆಸ್ ಸಹಿತ ಹರಾಜು ಕಾಯಂಆದ ಸಂಗತಿ ತಿಳಿಸಲ್ಪಟ್ಟ ತಾರೀಖು ಲಾಗಾಯತು 7 ದಿವಸಗಳಲ್ಲಿ ಪಾವತಿಮಾಡಬೇಕು. ಹಾಗೆ ಬಾಕಿ ಮೊಬಲಗನ್ನು ಪಾವತಿ ಮಾಡುವದಕ್ಕೆ ಜಡಸವಾಲ್‌ದಾರನು ತಪ್ಪಿದಲ್ಲಿ ಅವನಿಂದ ಹಾಜರ್ಮಾಡಲ್ಪಟ್ಟ ಡಿಪಾಜಿಟ್ ಮೊಬಲಗು ಸರ್ಕಾರಕ್ಕೆ ದಂಡವಾಗಿ ತೆಗೆದುಕೊಳ್ಳಲ್ಪಡುವದು, ಡಿಪಾಜಿಟ್ ಹಾಜರ್ಮಾಡುವದಕ್ಕಾಗಲಿ ಅಥವಾ ಬಾಕಿ ಹಣವನ್ನ ಪಾವತಿಮಾಡುವದಕ್ಕಾಗಲಿ ತಪ್ಪಿದರೆ ಈ ಬಾಬು ಪುನಹ ಹರಾಜು ಮಾಡಲ್ಪಟ್ಟು ಅದರಿಂದ ಉಂಟಾಗುವ ನಷ್ಟಕ್ಕೆ ಮೊದಲ್ ಸವಾಲ್‌ದಾರನನ್ನ ಗುರುಮಾಡಲ್ಪಡುತ್ತೆ.

(3.) ಇತರ ಷರತ್ತುಗಳು ಯಾವವಂದರೆ—

(a) ಇಜಾರೆದಾರನು ಹಿಡುವಳಿ ಜಮೀನಿನಲ್ಲಿರತಕ್ಕ ಕುರಂಗದ ಕಲ್ಲುಗಳನ್ನ ಆಯಾ ಹಿಡುವಳಿದಾರನ ಅನುಮತಿ ವಿನಹ ಆರಿಸಿಕೊಳ್ಳಕೂಡದು. ಪರಂತು ತಪ್ಪ್ಯಾ ಹಿಡುವಳೀ ಜಮೀನಿನಲ್ಲಿ ಇರತಕ್ಕ ಕಲ್ಲುಗಳು ಜಮಾಯಿಸಿ ಕೊಳ್ಳುವದಕ್ಕಾಗಲಿ ಅಥವಾ ಇಜಾರೆದಾರನಿಗೇ ವಿನಹ ಇತರರಿಗೆ ಮಾರುವದಕ್ಕೇ ಆಗಲಿ ಹಿಡುವಳಿದಾರರಿಗೆ ಅಧಿಕಾರವಿರುವದಿಲ್ಲ.

(b) ಇಜಾರೆದಾರನು ಹುಲ್ಲುಮನ್ನಿ ಯಾ ಹುಲ್ಲುಗಾವಲ್ ಇಜಾರೆದಾರ್ರ ಹಕ್ಕಿಗೆ ಆಟಂಕ ಪಡಿಸಕೂಡದು.

(c) ಹಿಡುವಳಿಯಲ್ಲಿ ಯಿಲ್ಲಾ ಜಮೀನುಗಳನ್ನ ಸರಕಾರದವರು ದರಖಾಸ್ತುಗಳು ಬಂದಾಗ ಸಾಗುವಳಿಗೆ ಕೊಡತಕ್ಕ ವಿಷಯದಲ್ಲಿ ಇಜಾರೆದಾರನ ಅಭ್ಯಂತರವೇನೂ ಯಿರುವದಿಲ್ಲ. ಮತ್ತು ಅಂಥಾ ಜಮೀನುಗಳಲ್ಲಿ ಶಿಕ್ಕುವ ಕುರಂಗದ ಕಲ್ಲುಗಳನ್ನ ತೆಗೆದುಕೊಳ್ಳಲು ಅವರಿಗೆ ಹಕ್ಕು ಯಿರುತ್ತೆ.

(d) ಕಲ್ಲುಗಳನ್ನು ಜಮಾಯಿಸುವದಕ್ಕೊಸ್ಕರ ಜಮೀನುಗಳನ್ನ ಇಜಾರೆದಾರನು ಆಗೆಯಕೂಡದು. ಬಂದು ವೇಳೆ ಆಗೆದರೆ ಸಾಗುವಳಿಗೆ ಅನುಕೂಲಿಸುವ ಹಾಗೆ ಗುಣಿಗಳನ್ನ ಮುಚ್ಚಿ ಸರಿಪಡಿಸಬೇಕು.

(e) ಕಲ್ಲುಗಳು ಜಮಾಯಿಸಲ್ಪಟ್ಟ ಗ್ರಾಮ, ಇಷ್ಟುಮಣ ಕಲ್ಲು ಮತ್ತು ಅದು ರಫ್ತಾಗುವ ಸ್ಥಳ ಈ ತಪ್ಶೀಲ್ ಕಂಡು ತಾಲ್ಲೂಕು ಆಮಲ್‌ದಾರ್ರಿಂದ ಬಂದು ಮೂಫೀ ಲೈಸೆನ್ಸ್ ಪಡೆಯದೆ ಕಲ್ಲುಗಳನ್ನು ಇಜಾರೆದಾರ್ರು ಸಾಗಿಸಕೂಡದು.

ಬಿ. ಕೆ. ವೆಂಕಟವರದಯ್ಯಂಗಾರ್,
ಡೆಪ್ಯುಟಿ ಕಮ್ಮಿಷನರ್.

ಫ್ರೆಂಚ್‌ರಾಕ್ಸ್ ಸಬ್ ಡಿವಿಜ್ ಆಫಿಸ್.

ತಾರೀಖು 1ನೇ ಜುಲೈ 1896ನೇ ಇಸವಿ.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಮಂಡ್ಯ ತಾಲ್ಲೂಕು ಕುದರಗುಂಡಿ ಹೋಬಳಿ ಸರ್ವಮಾನ್ಯ ಗವಡಗೆರೇ ಗ್ರಾಮದ ಕೆರೆಗೆ ನೀರು ಬರತಕ್ಕ ನೀರು ಹರಿಯುವ ಹಳ್ಳದಲ್ಲಿ, ಬಂದು ಕುಡಿಕೆಯಲ್ಲಿ ದೊರಕಿದ (17—4—0) ಅಂದಾಜಾ ವುಳ್ಳ ಚಿನ್ನದ ಬುಗಡಿ ಅದದು 4 ಡಿಟೋ ನಾಗರ ಕಡಕು 2 ಕೊಂಡ್ಲು 1 ಕಂಟಿರಾಯಿ ಹಣ 7 ಗೂಪಹಣ 4 ಸಹ ದೊರಕಿದ್ದಾಗಿ ಹಾಜರಾಗಿರುವದು ಅವಾನತ್ತು ಯಿದೆ. ಈ ನಿಕ್ಷೇಪಕ್ಕಾಗಲಿ ಅಥವಾ ಇದರ ವಂದು ಭಾಗಕ್ಕಾಗಲಿ ಹಕ್ಕುದಾರರಾಗಿ ಇರತಕ್ಕವರು ಖುದ್ದಾಗಿಯೇ ಆಗಲಿ ಅಥವಾ ವಕೀಲರ ಮುಖಾಂತರವಾಗಿಯೇ ಆಗಲಿ 1896ನೇ ಇಸವಿ ಡಿಸೆಂಬರ್ ತಾರೀಖು 18ನೇ ಮಧ್ಯಾನ್ನ ದಿವಿ 12 ಘಂಟೆಗೆ ಫ್ರೆಂಚರಾಕ್ಸ್ ಸಬ್ ಡಿವಿಜ್ ಆಫಿಸ್ ರೂಬರೂಬ್ ಹಾಜರಾಗಿ ಅವುಗಳಲ್ಲಿ ತನುಗಿರುವ ಹಕ್ಕನ್ನ ಸ್ಥಿರಪಡಿಸಿ ಕೊಡಬೇಕು.

ಪಿ. ಪಂಚನಾಥರಾವ್,
ಸಬ್ ಡಿವಿಜ್ ಆಫಿಸರ್.

ಮೈಸೂರ ಗೆಜೆಟ್ ಚಂದಾ ದರ ವಗೈರೆ.

ತಾರೀಖು 26ನೇ ಜನವರಿ 1889.

ಮೈಸೂರ ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ, ಮತ್ತು ಸದರೀ ಗೆಜೆಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸು ಮುಂತಾದವುಗಳೂ ಬೆಂಗಳೂರಲ್ಲಿರುವ ಮೈಸೂರ ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ.	ಟಪ್ಪಾಲ್ ಹಾಸಲು ಮೈಸೂರು ೀವೆ ಶಿವಾಯಿ ಇತರ ಸ್ಥಳಗಳಿಗೆ.
	ರೂ. ಆ.	ರೂ. ಆ.
ಇಂಗ್ಲೀಷು ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3 8	1 12
ಇಂಗ್ಲೀಷು ಮತ್ತು ಕನ್ನಡ ಸುದಾ 12 ತಿಂಗಳಿಗೆ	7 0	3 8
ಚೆಷ್ ಮಾಹೇ ಯಾ ಕ್ವಾರ್ಟರಿಗೆ		ದಾಮಾಷಾಯಿ ಪ್ರಕಾರ ದರಗಳು.
ಚಾಲ್ತಿ ವರುಷದ ಗೆಜೆಟ್ ಕಾಪಿ 1ಕ್ಕೆ ರೆಗ್ಯುಲೇರ್ಸ್ ಯಾ ಆಕ್ಟುಗಳು ಯಾವದೂ ಇಲ್ಲದಿದ್ದರೆ.		0 8

ಹಿಂದಿನ ವರುಷದ ಗೆಜೆಟ್ ಕಾಪಿಗಳಿಗೆ ಚಾರ್ಜು ಕೇಳಿ ತಿಳಿದುಕೊಳ್ಳಬಹುದು.

1891ನೇ ಇಸವಿ ಜುಲೈ 2ನೇ ಮಕ್ಕುಂ 155ನೇ ನಂಬರ್ ಉಳ್ಳ ಗವರ್ಮೆಂಟ್ ಇಸ್ತಿಹಾರ್‌ನಾಮೆ ಅನುಸರಿಸಿ ಕನ್ನಡ ಗೆಜೆಟ್ ಮೈಸೂರು ೀವೆಮಲ್ಲಿನ ಪಟೇಲ್ ಶಾನುಭೋಗರುಗಳಿಗೆ ಅರ್ಧ ದರಕ್ಕೆ ಕೊಡಲ್ಪಡುವದು; ಆದರೆ ಅಂಥಾ ಪಟೇಲ್, ಶಾನುಭೋಗರುಗಳ್ ಆ ಕಾಲದಲ್ಲಿ ವಾಸ್ತವ್ಯವಾಗಿ ಪಟೇಲಿ ಯಾ ಶಾನುಭವಿಕೆ ಕೆಲಸ ನೋಡುತಲಿದ್ದಾರೆಂಬದಾಗಿ ಆಯಾ ತಾಲ್ಲೂಕು ಅಮಲ್ದಾರರಿಂದ ವಂದು ಸರಟಿಫಿಕೇಟನ್ನ ಪಡೆದು ಹಾಜರ್ಮಾಡಬೇಕಾಗಿರುತ್ತೆ.

1895ನೇ ಇಸವಿ ಜೂನ್ 21ನೇ ಮಕ್ಕುಂ 24205—6—ಜಿ. 6200ನೇ ನಂಬರ್ ಗವರ್ಮೆಂಟ್ ಆರ್ಡರ್ ಅನುಸರಿಸಿ ಹೋಲ್ಕಂಡರಿಯಾಯತಿ ದರವು, ನಾಡ ಪಟೇಲರಿಗೂ ಲಗಾವ್ ಮಾಡಲ್ಪಟ್ಟಿರುತ್ತೆ.

ಸಿವಿಲ್ ಕೋರ್ಟ್‌ನಿಂದ ಕೊಡಲ್ಪಡುವ 1860ನೇ ಇಸವಿ XXVIIನೇ ಆಕ್ಟು ಅನುಸರಿಸಿ ಸರ್ಟಿಫಿಕೇಟ್ ಬಗ್ಯೆ ನೋಟಿಸ್‌ಗಳು:—

ಮೊದಲನೇ ದಫಾ ಫಾಯಿಷ್ ಮಾಡತಕ್ಕ ಬಗ್ಯೆ ಇಂಗ್ಲೀಷು ಅಥವಾ ಕನ್ನಡ ..	2 8
ಎರಡನೇ ಸಲ ವ ಆ ತರುವಾಯ ಪ್ರತಿ ಆವರ್ತಿಗೂ ಡಿಟೋ	1 4

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 347ನೇ ಸೆಕ್ಷರ್ ಅನುಸರಿಸಿ ದಿವಾಳೀ ಆಪ್ಲಿಕೇಷ್ಟಗಳ ಬಗ್ಯೆ ನೋಟಿಸ್‌ಗಳಿಗೆ :—

ಮೊದಲನೇ ಸಲಕ್ಕೆ	5 0
ಎರಡನೇ ವ ಆ ತರುವಾಯ ಪ್ರತಿ ದಫಾಕ್ಕೆ	2 8

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 354ನೇ ಸೆಕ್ಷರ್ಅನುಸರಿಸಿ ಸಿವಿಲ್ ಕೋರ್ಟ್ಗಳಿಂದ ಕೊಡಲ್ಪಡುವ ದಿವಾಳೀ ಹುಕುಂಗಳು ಬಗರ್ ಚಾರ್ಜ್ ಪ್ರಕಟಿಸಲ್ಪಡುತವೆ.

ಜ್ಯೂಡಿಕೇಟ್ ಕಾಫೀ ಪಟ್ಟೆ ವಗೈರೇ ಕೊಡುವ ಬಗ್ಯೆ ರೆವಿನ್ಯೂ ಆಫಿಸರ್‌ಗಳು ಕೊಡುವ ನೋಟಿಸ್‌ಗಳಿಗೆ :—

ಮೊದಲನೇ ಸಲಕ್ಕೆ ಪುಟ 1ಕ್ಕೆ ..	10 0
ಎರಡನೇ ಸಲ ವ ಆ ತರುವಾಯ ಪ್ರತಿ ಸಲಕ್ಕೂ " ..	5 0

ಖಾಸಗೀ ಪ್ರಕಟನೆಗಳಿಗೆ ಈ ಕೆಳಗೆ ಕಾಣಿಸಲ್ಪಡುವ ದರಗಳ ಪ್ರಕಾರ ಚಾರ್ಜ್ ಮಾಡಲ್ಪಡುತ್ತೆ:—

ಮೊದಲನೇ ದಫಾ ಇಂಗ್ಲೀಷ್ ಅಥವಾ ಕನ್ನಡಕ್ಕೆ		ಪಜ್ತಿ 1ಕ್ಕೆ ..	0 8
ಎರಡನೇ ದಫಾ	ಡಿಟೋ	ಡಿಟೋ ..	0 6
ಮೂರನೇ ವ ಆ ತರುವಾಯ ಪ್ರತಿ ಸಲಕ್ಕೆ	..	..	0 4

ಸರಾ.—ಚಂದಾ ವಗೈರೇ ಬಗ್ಯೆ ಪೋಸ್ಟೇಜ್ ಲೇಬಿಲ್ಲು ಕಳುಹಿಸಲ್ಪಟ್ಟಾಗ ರೂಪಾಯಿಗೆ ವಂದಾಣೆ ಯಂತೆ ಜಾಸ್ತೀ ಲೇಬಿಲ್ಲು ಕಳುಹಿಸಲ್ಪಡತಕ್ಕದ್ದು.

ಗವರ್ಮೆಂಟ್ ಆರ್ಡರ್ ಪ್ರಕಾರ ತಮಾಂ ಚಂದಾ ವೊಬಲಗುಗಳೂ, ಪ್ರಕಟನೇ ಚಾರ್ಜುಗಳೂ ಮುಂಗಡವಾಗಿ ಪಾವತಿ ಮಾಡಲ್ಪಡಬೇಕು.

ಸರ್ಕಾರಿಯಾಗಿ ಗೆಜೆಟ್ ಪಡೆಯುವ ಬಗ್ಯೆದ ದರಖಾಸ್ತುಗಳು ಮೈಸೂರ್ ಗವರ್ಮೆಂಟ್ ಜನರಲ್ ಮತ್ತು ರೆವಿನ್ಯೂ ಇಲಾಖೆ ಸೆಕ್ರಿಟೆರಿಯವರಿಗೆ ಕಳುಹಿಸಲ್ಪಡತಕ್ಕದ್ದು.

ಗೆಜೆಟ್ ತಲಪಲಿಲ್ಲವೆಂಬ ಫಿರ್ಯಾದ್‌ಗಳು ಇದರಡಿ ರುಜು ಮಾಡಿರುವವರಿಗೆ ಅದು ತಲಪಬೇಕಾದ ತಾರೀಖು ಲಾಗಾಯತು ಒಂದು ವಾರದ ಒಳಗಾಗಿ ತಿಳಿಸಲ್ಪಡಬೇಕು.

ಮೈಸೂರ ಗೆಜೆಟ್‌ನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸ್ ವ ಇಸ್ತಿಹಾರ್‌ನಾಮೆಗಳೂ ಆ ಗೆಜೆಟ್ ಛಾಪಿಸಲ್ಪಡುವ ಹಿಂದಿನ ಮಂಗಳವಾರದ ದಿವಸ ಮಧ್ಯಾಹ್ನ 12 ಘಂಟೆ ಒಳಗಾಗಿ ಕಂಪ್ಯೆಲರ್ ಆಫಿಸಿಗೆ ತಲಪಬೇಕಾಗಿರುತ್ತೆ, ಆ ತರುವಾಯ ಕಳುಹಿಸಲ್ಪಡುವ ಯಾ ತಲಪುವ ಕಾಗದಗಳು, ಕಲಸ ನಿರ್ವಾಹಕ್ಕೆ ಅನುಕೂಲವಾಗಿದ್ದರೇನೇ ಹೊರ್ತು ಅನ್ಯಥಾ ಅದೇ ವಾರದ ಗೆಜೆಟ್ಟಿನಲ್ಲಿ ಛಾಪಿಸಲ್ಪಡುತ್ತೆಂಬ ಖಾತರಿ ಯಿಲ್ಲ.

ಸಿ. ವಿ. ರಾಘವಾಚಾರ್ಲು,
ಮೈಸೂರ್ ಗೆಜೆಟ್ ಕಂಪ್ಯೆಲರ್.